# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ.. ಕನ್ನಡ ವಾರಪತ್ರಿಕೆ

**ಸುಭಾಷಿತ:**
ನ್ಯಾಯಯುತವಾಗಿ ಧರ್ಮಮಾರ್ಗದಲ್ಲಿ ನಡೆಯುವ ವ್ಯಕ್ತಿಯ ಶುಭ್ರ ಮನಸ್ಸು ಶಾಂತವಾಗಿರುತ್ತದೆ. ಆ ವ್ಯಕ್ತಿ ನೆಮ್ಮದಿಯ ಬದುಕನ್ನು ಕಾಣುತ್ತಾನೆ.. ಅಧರ್ಮದ ದಾರಿಯಲ್ಲಿ ನಡೆದೂ, ಸನ್ಯಾಸಕ್ಕೆ ಒಳಗಾಗುವವನ ಮನಸ್ಸು ಗೊಂದಲಕ್ಕೀಡಾಗುತ್ತದೆ ಅವನು ಸುಖಮಯ ಜೀವನ ನಡೆಸಲು ಸಾಧ್ಯವಿಲ್ಲ.. ಅನೇಕ ಪಾಪಕರ್ಮಗಳನ್ನು ಹೊತ್ತುಕೊಂಡು ಸೃಷ್ಟಿಯಲ್ಲಿ ಜನಿಸಿದರೂ, ಆತನ ನಡತೆಯಿಂದ ಮತ್ತು ಆತ ಮಾಡುವ ಉತ್ತಮ ಕಾರ್ಯಗಳಿಂದ ಆತನ ಪಾಪ ಪುಣ್ಯಗಳನ್ನು ಅಳೆಯಲಾಗುತ್ತದೆ..
**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 02-05-2025 to 08-05-2025 ಬೆಲೆ: 7-00 ಸಂಪುಟ–4 ಸಂಚಿಕೆ–45 ಪುಟಗಳು–6

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು






**ನಮ್ಮ ನೆರೆಯ ದೇಶ ಪಾಕಿಸ್ಥಾನದ ಮೇಲೆ ಇಂದಿನ ದಿನಮಾನಗಳಲ್ಲಿ ಕೆಲವರಿಗೆ ಪ್ರೀತಿ ಹೆಚ್ಚಾಗುತ್ತಿದ್ದು, ಪಾಕಿಸ್ಥಾನದ ಪಾಪಿ ಕೆಲಸವನ್ನು ಸಮರ್ಥಿಸಿಕೊಳ್ಳುವವರು ಹೆಚ್ಚಾಗುತ್ತಿದ್ದಾರೆ. ಹೀಗೆ ಸಮರ್ಥಿಸಿಕೊಳ್ಳುವವರು ಖಂಡಿತಾ ಒಂದು ಸಮುದಾಯಕ್ಕೆ ಸೇರಿದವರಲ್ಲಾ ಎನ್ನುವುದೇ ಆಶ್ಚರ್ಯದ ಸಂಗತಿ. ತಮ್ಮ ದೇಶದ ಮೇಲೆ ಗೌರವ, ಪ್ರೀತಿ ಇಲ್ಲದವರಿಗೆ ದೇಶದ್ರೋಹಿಗಳು ಎನ್ನುವುದನ್ನು ಇಂದಿನ ಪೀಳಿಗಗೆ ಮನದಟ್ಟು ಮಾಡುವ ಅಗತ್ಯ ಇದೆ.**

## ಹಿಂದೂಗಳ ಮನೆಯಲ್ಲಿ ತಲವಾರು ಇರಲಿ –ಭಟ್



**ಮಂಗಳೂರು:** ಪ್ರತಿಯೊಬ್ಬ ಹಿಂದೂಗಳ ಮನೆಯಲ್ಲಿ ತಲವಾರು ಇರಲಿ. ಹೆಂಗಸರು ಚೂರಿ ಇಟ್ಟುಕೊಳ್ಳಿ. ಇವತ್ತಿನ ಕಾಲಘಟ್ಟದಲ್ಲಿ ಇದು ಯೋಚನೆ ಮಾಡಬೇಕಾದ ಸಂಗತಿ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ ಮುಖಂಡ ಡಾ. ಕಲ್ಲಡ್ಕ ಪ್ರಭಾಕರ ಭಟ್ ಹೇಳುವ ಮೂಲಕ ಸಂಚಲನ ಎಬ್ಬಿಸಿದ್ದಾರೆ. ರಾಜ್ಯದ ಗಡಿಭಾಗದಲ್ಲಿರುವ ಕೇರಳದ ವರ್ಕಾಡಿಯ ನೀರೊಳಿಕೆಯ ಶ್ರೀಮಾತಾ ಚಾರಿಟಬಲ್ ಟ್ರಸ್ಟ್ ಮತ್ತು ಶ್ರೀಮಾತಾ ಸೇವಾಶ್ರಮ ಈಚೆಗೆ ಆಯೋಜಿಸಿದ್ದ ದಶಮಾನೋತ್ಸವ ಚಂಡಿಕಾಯಾಗದ ಧಾರ್ಮಿಕ ಸಭೆಯಲ್ಲಿ ಅವರು ಮಾತನಾಡಿ, ಹೆಣ್ಣು ಮಕ್ಕಳು ವ್ಯಾನಿಟ ಬ್ಯಾಗಿನಲ್ಲಿ ಸ್ನೋ, ಪೌಡರ್, **3ನೇ ಪುಟಕ್ಕೆ**

## ಗೃಹಸಚಿವರು ರಾಜಿನಾಮೆ ನೀಡಬೇಕು –ಎಸ್‌ಡಿಪಿಐ




**ಮಂಗಳೂರು:** ಮಂಗಳೂರಿನಲ್ಲಿ ಗುಂಪು ಥಳಿತದಿಂದ ಹತ್ಯೆಗೀಡಾದ ವಲಸೆ ಕಾರ್ಮಿಕ ಪಾಕಿಸ್ಥಾನ ಪರ ಘೋಷಣೆ ಕೂಗಿದ್ದಾನೆ ಎಂದು ಆರೋಪಿಸಿದ ಗೃಹ ಸಚಿವ ಡಾ. ಜಿ.ಪರಮೇಶ್ವರ ತಕ್ಷಣ ಆ ಹೇಳಿಕೆಯನ್ನು ಹಿಂಪಡೆಯುವುದರೊಂದಿಗೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಎಸ್‌ಡಿಪಿಐ ಮಂಗಳೂರು ನಗರ ಜಿಲ್ಲಾಧ್ಯಕ್ಷ ಜಲೀಲ್ ಕೃಷ್ಣಾಪುರ ಆಗ್ರಹಿಸಿದ್ದಾರೆ. ನಗರದ ಎಸ್‌ಡಿಪಿಐ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಗೃಹ ಸಚಿವ ಪರಮೇಶ್ವರ ಅವರು **3ನೇ ಪುಟಕ್ಕೆ**

## ಬಿಜೆಪಿಯವರ ಪ್ರಚೋದನೆಯಿಂದ ಹತ್ಯೆ –ಹರೀಶ್ ಕುಮಾರ್



**ಮಂಗಳೂರು:** ಬಿಜೆಪಿಯವರ ಪ್ರಚೋದನೆಯಿಂದಾಗಿ ಜಿಲ್ಲೆಯಲ್ಲಿ ಯುವಜನರು ತಪ್ಪುದಾರಿ ತುಳಿಯುತ್ತಿದ್ದಾರೆ. ಕುಡುಪುವಿನಲ್ಲಿ ನಡೆದ ಗುಂಪು ಹಲ್ಲೆಯಿಂದ ಯುವಕ ಮೃತಪಟ್ಟಿರುವ ಪ್ರಕರಣವೂ ಬಿಜೆಪಿ ಕಾರ್ಯಕರ್ತನ ಪ್ರಚೋದನೆಯಿಂದಲೇ ನಡೆದಿದೆ ಎಂದು ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಹರೀಶ್ ಕುಮಾರ್ ಕೆ. ಆರೋಪಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದುಳಿದ ವರ್ಗದ ಯುವಕರನ್ನು ಪ್ರಚೋದಿಸುವ ಕೆಲಸ ಹಿಂದಿನಿಂದಲೂ ಬಿಜೆಪಿಯವರು ಮಾಡುತ್ತಿದ್ದಾರೆ. **3ನೇ ಪುಟಕ್ಕೆ**






ಕರಾವಳಿ ತರಂಗಿಣಿ
# ಕಲಾ ತರಂಗಿಣಿ

## ಮುಖ್ಯಪಾತ್ರದಲ್ಲಿ ರಾಗಿಣಿ ದ್ವಿವೇದಿ – ಧರ್ಮ ಕೀರ್ತಿರಾಜ್ ಸಿಂಧೂರಿ

ಎಸ್ ರಮೇಶ್ (ಬನಶಂಕರಿ) ನಿರ್ಮಾಣದ, ಶಂಕರ್ ಕೋನಮಾನಹಳ್ಳಿ ನಿರ್ದೇಶನದ ಹಾಗೂ ರಾಗಿಣಿ ದ್ವಿವೇದಿ & ಧರ್ಮ ಕೀರ್ತಿರಾಜ್ ಪ್ರಮುಖಪಾತ್ರದಲ್ಲಿ ನಟಿಸುತ್ತಿರುವ "ಸಿಂಧೂರಿ" ಚಿತ್ರದ ಮುಹೂರ್ತ ಸಮಾರಂಭ ಬೆಂಗಳೂರು ನಗರದ ಪ್ರಸಿದ್ಧ ಬನಶಂಕರಿ ದೇವಸ್ಥಾನದಲ್ಲಿ ಅಕ್ಷಯ ತೃತೀಯದ ಶುಭದಿನದಂದು ಅದ್ದೂರಿಯಾಗಿ ನೆರವೇರಿತು. ಚಿತ್ರತಂಡದ ಸದಸ್ಯರು ಹಾಗೂ ಸಾಕಷ್ಟು ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು. ಆನಂತರ ಚಿತ್ರತಂಡದ ಸದಸ್ಯರು ಚಿತ್ರದ ಕುರಿತು ಮಾಹಿತಿ ನೀಡಿದರು. ನಿರ್ದೇಶಕನಾಗಿ ಇದು ನನಗೆ ನಾಲ್ಕನೇ ಚಿತ್ರ ಎಂದು ಮಾತನಾಡಿದ ನಿರ್ದೇಶಕ ಶಂಕರ್ ಕೋನಮಾನಹಳ್ಳಿ, ಮೇ 10ರಿಂದ ಈ ಚಿತ್ರದ ಚಿತ್ರೀಕರಣ ಪ್ರಾರಂಭವಾಗಲಿದೆ. ಸಕಲೇಶಪುರ ಮುಂತಾದ ಕಡೆ 45 ದಿನಗಳ ಒಂದೇ ಹಂತದ ಚಿತ್ರೀಕರಣ ನಡೆಯಲಿದೆ. ಶೀರ್ಷಿಕೆ ಕೇಳಿದರೆ, ರೋಹಿಣಿ ಸಿಂಧೂರಿ ಮತ್ತು ಡಿ.ಕೆ. ರವಿ ಅವರ ಕಥೆಯಾ ? ಎಂದು ಹಲವರು ಕೇಳಿದ್ದಾರೆ. ಆದರೆ ರೋಹಿಣಿ ಸಿಂಧೂರಿ ಅವರಿಗೂ ಈ ಚಿತ್ರಕ್ಕೂ ಯಾವುದೇ ಸಂಬಂಧವಿಲ್ಲ. ಇದೊಂದು ಕಾಲ್ಪನಿಕ ಕಥೆ. ಇದೊಂದು ಮರ್ಡರ್ ಮಿಸ್ಟ್ರಿ. ಇಲ್ಲಿ ರಾಗಿಣಿ ಮತ್ತು ಧರ್ಮ ಕೀರ್ತಿರಾಜ್ ಜೋಡಿಯಾಗಿ ನಟಿಸುತ್ತಿಲ್ಲ. ರಾಗಿಣಿ ಅವರು ಕಥೆಗೆ ಟರ್ನಿಂಗ್ ಪಾಯಿಂಟ್ ನೀಡುವ ಪಾತ್ರದಲ್ಲಿ ಅಭಿನಯಿಸುತ್ತಿದ್ದಾರೆ. ನಾನು 'ಬಿಂಗೋ' ಚಿತ್ರದ ಚಿತ್ರೀಕರಣ ಮಾಡುವಾಗ, ರಾಗಿಣಿ ಅವರಿಗೆ ನನ್ನ ಕೆಲಸ ಇಷ್ಟವಾಗಿ, ಜೊತೆಯಾಗಿ ಇನ್ನೊಂದು ಸಿನಿಮಾ ಮಾಡೋಣ ಎಂದರು. ಆ ಸಂದರ್ಭದಲ್ಲಿ ಒಂದು ಕಥೆ ಹೇಳಿದೆ. ಅವರಿಗೆ ಇಷ್ಟವಾಗಿ ಈ ಚಿತ್ರ ಮಾಡೋಣ ಎಂದರು. ಚಿತ್ರಕಥೆ ಬರೆದೆ. ನಿರ್ಮಾಪಕರಿಗೂ ಓಕೆ ಆಯಿತು. ಇಂದು ಚಿತ್ರ ಪ್ರಾರಂಭವಾಗಿದೆ. ಸಾಮಾನ್ಯವಾಗಿ ಧರ್ಮ ಅವರು ಚಾಕಲೋಟ್ ಬಾರ್‌ಆಗಿ ಹಲವು ಚಿತ್ರಗಳಲ್ಲಿ ಕಾಣಿಸಿಕೊಂಡಿದ್ದರು. ಈ ಚಿತ್ರದಲ್ಲಿ ಅವರದ್ದು ವಿರುದ್ಧವಾದ ಪಾತ್ರ. ಸಾಕಷ್ಟು ತಯಾರಿ ನಡೆಸುತ್ತಿದ್ದಾರೆ. ಚಿತ್ರದ ನಾಯಕಿ ಹಾಗೂ ಉಳಿದ ತಾರಾಬಳಗದ ಬಗ್ಗೆ ಸದ್ಯದಲ್ಲೇ ತಿಳಿಸುತ್ತೇವೆ ಎಂದರು. ಏಳೆಂಟು ವರ್ಷಗಳ ಹಿಂದೆ 'ವಿಕ್ಕಿ' ಎಂಬ ಚಿತ್ರ ಮಾಡಿದ್ದೆ. ನಿರ್ದೇಶಕರು ಮೋಸ ಮಾಡಿ ಹೋದರು. ಕೊನೆಗೆ ನಾನು ಚಿತ್ರ ಮುಗಿಸಿ ಬಿಡುಗಡೆ ಮಾಡಿದೆ. ಮುಂದೆ ಚಿತ್ರ ಮಾಡಬಾರದು ಎಂದು ನಿರ್ಧರಿಸಿದ್ದೆ. ಶಂಕರ್ ಬಂದು ಕಥೆ ಹೇಳಿದರು. ಬನಶಂಕರಮ್ಮನ ಆಶೀರ್ವಾದದಿಂದ ಒಂದೊಳ್ಳೆಯ ದಿನದಂದು ಚಿತ್ರ ಪ್ರಾರಂಭಿಸಿದ್ದೇನೆ ಎಂದು ನಿರ್ಮಾಪಕ ಎಸ್ ರಮೇಶ್ (ಬನಶಂಕರಿ) ತಿಳಿಸಿದರು. ಚಿತ್ರಕ್ಕೆ ಇಂದು ಒಳ್ಳೆಯ ಆರಂಭ ಸಿಕ್ಕಿದೆ ಎಂದರು.



## ದೊಡ್ಮನೆ ಕುಡಿಗೆ ದುನಿಯಾ ವಿಜಯ್ ಪುತ್ರಿ ನಾಯಕಿ

ಪಿಆರ್‌ಕೆ-ಕೆಆರ್‌ಜಿ-ಜಯಣ್ಣ ಫಿಲ್ಮಂ ಬ್ಯಾನರ್‌ನಡಿ ಮತ್ತೊಂದು ಸಿನಿಮಾ..ಯುವ-ರಿತನ್ಯಾಗೆ ಸೂರಿ ಆಕ್ಷನ್ ಕಟ್ ಅಶ್ವಿನಿ ಪುನೀತ್ ರಾಜ್‌ಕುಮಾರ್ ಅವರ ಪಿಆರ್‌ಕೆ, ಕಾರ್ತಿಕ್ ಗೌಡ ಹಾಗೂ ಯೋಗಿ ಜಿ ರಾಜ್ ಒಡೆತನದ ಕೆಆರ್‌ಜಿ ಹಾಗೂ ಜಯಣ್ಣ-ಭೋಗಣ್ಣ ಅವರ ಜಯಣ್ಣ ಫಿಲ್ಮಂಸ್ ಬ್ಯಾನರ್‌ನಡಿ ಎಕ್ಕ ಸಿನಿಮಾ ಅದ್ದೂರಿಯಾಗಿ ತಯಾರಾಗುತ್ತಿದೆ. ಈ ಚಿತ್ರ ಬಿಡುಗಡೆಗೂ ಮುನ್ನವೇ ಈ ಪ್ರೊಡಕ್ಷನ್ಸ್ ನಡಿ ಹೊಸ ಸಿನಿಮಾ ಘೋಷಣೆಯಾಗಿದೆ. ಬಹಳ ದಿನಗಳಿಂದ ಕೇಳಿ ಬರ್ತಿದ್ದ ಯುವರಾಜ್‌ಕುಮಾರ್ ಹಾಗೂ ಸುಕ್ಕ ಸೂರಿ ಸಿನಿಮಾಗೆ ಇಂದು ಅಧಿಕೃತ ಚಾಲನೆ ಸಿಕ್ಕಿದೆ. ಅಕ್ಷಯ ತೃತೀಯದಿನವಾದ ಇಂದು ಬೆಂಗಳೂರಿನ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಸರಳವಾಗಿ ಮುಹೂರ್ತ ನೆರವೇರಿದೆ. ಸ್ಯಾಂಡಲ್‌ವುಡ್ ಸಲಗ ದುನಿಯಾ ವಿಜಯ್‌ಕುಮಾರ್ ಕ್ಲಾಪ್ ಮಾಡಿದ್ದು, ಅಪ್ಪು ಅವರ ಮಗಳು ಧೃತಿ ಪುನೀತ್ ರಾಜ್‌ಕುಮಾರ್ ಕ್ಯಾಮರಾ ಚಾಲನೆ ಮಾಡಿ ಇಡೀ ತಂಡಕ್ಕೆ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಯುವ ಫ್ಯಾಮಿಲಿ, ಅಶ್ವಿನಿ ಪುನೀತ್ ರಾಜ್‌ಕುಮಾರ್, ಕಾರ್ತಿಕ್ ಗೌಡ, ಯೋಗಿ ಜಿ.ರಾಜ್, ನಿರ್ದೇಶಕ ಸೂರಿ ಸೇರಿದಂತೆ ಇಡೀ ಚಿತ್ರತಂಡ ಉಪಸ್ಥಿತರಿದ್ದರು. ಸುಕ್ಕ ಸೂರಿ ರಾಸ್ಟೈಲ್ ಮೇಕಿಂಗ್‌ಗೆ ಫೇಮಸ್.. ಹೀಗಾಗಿ ಯುವ ಅವರ ಗರಡಿಯಲ್ಲಿ ಯಾವ ರೀತಿ ಕಾಣಿಸಲಿದ್ದಾರೆ ಎಂಬ ಕುತೂಹಲವಿದೆ. ಇನ್ನೂ ದುನಿಯಾ ವಿಜಯ್ ಮೊದಲ ಪುತ್ರಿ ರಿತನ್ಯಾ ವಿಜಯ್ ಕುಮಾರ್ ಈ ಚಿತ್ರದ ನಾಯಕಿ. ಈಗಾಗಲೇ ಅಪ್ಪನ ಜೊತೆ ಲ್ಯಾಂಡ್ ಲಾರ್ಡ್ ಸಿನಿಮಾ ಮೂಲಕ ಇಂಡಸ್ಟ್ರೀಗೆ ಬಲಗಾಲಿಟ್ಟಿರುವ ರಿತನ್ಯಾಗೆ ಇದು ಎರಡನೇ ಸಿನಿಮಾವಾದರೆ, ಯುವ ರಾಜ್ ಕುಮಾರ್‌ಗೆ ಇದು ಮೂರನೇ ಚಿತ್ರ. ಸೂರಿ ಗರಡಿಯಲ್ಲಿ ಛಾಯಾಂ ಆಗಿ ಕೆಲಸ ಮಾಡುವ ದೀಪು ಎಸ್ ಕುಮಾರ್ ಸಂಕಲನ, ಚರಣ್‌ರಾಜ್ ಸಂಗೀತ ನಿರ್ದೇಶನ, ಸಂತೋಷ್ ಕಲಾ ನಿರ್ದೇಶನ, ಶೇಖರ್ ಕ್ಯಾಮರಾ ವರ್ಕ್ ಈ ಚಿತ್ರಕ್ಕೆ ಇರಲಿದೆ. ಮೇ ತಿಂಗಳಾಂತ್ಯಕ್ಕೆ ಚಿತ್ರತಂಡ ಶೂಟಿಂಗ್ ಅಖಾಡಕ್ಕೆ ಇಳಿಯಲಿದೆ. ಪ್ರತಿಷ್ಠಿತ ಮೂರು ನಿರ್ಮಾಣ ಸಂಸ್ಥೆಯಡಿ ಬರ್ತಿರುವ ಸಿನಿಮಾ ಬಹಳ ದೊಡ್ಡಮಟ್ಟದಲ್ಲಿ ತಯಾರಾಗಲಿದೆ. ಜೂನ್‌ಗೆ ಎಕ್ಕ ಪಿಆರ್‌ಕೆ-ಕೆಆರ್‌ಜಿ-ಜಯಣ್ಣ ಫಿಲ್ಮಂ ಬ್ಯಾನರ್‌ನಡಿ ಬರ್ತಿರುವ ಯುವರಾಜ್ ಕುಮಾರ್ ನಾಯಕನಾಗಿ ಹಾಗೂ ರೋಹಿತ್ ಪದಕಿ ನಿರ್ದೇಶನದ ಎಕ್ಕ ಸಿನಿಮಾ ಜೂನ್‌ನಲ್ಲಿ ತೆರೆಗೆ ಬರಲಿದೆ. ಸದ್ಯ ಚಿತ್ರದ ಚಿತ್ರೀಕರಣ ಭರದಿಂದ ಸಾಗುತ್ತಿದೆ. ಈಗಾಗಲೇ ರಿಲೀಸ್ ಆಗಿರುವ ಟೀಸರ್ ಹಾಗೂ ಟೈಟಲ್ ಟ್ರ್ಯಾಕ್ ದೊಡ್ಡ ಮಟ್ಟದ ಹಿಟ್ ಕಂಡಿದೆ.



## ಸಾಲುಮರದ ತಿಮ್ಮಕ್ಕ ಅವರಿಂದ 'ಕುಲದಲ್ಲಿ ಕೀಳ್ಯಾವುದೋ' ಶೀರ್ಷಿಕೆ ಗೀತೆ

ಯೋಗರಾಜ್ ಸಿನಿಮಾಸ್ ಅರ್ಪಿಸುವ, ಪರ್ಲ್ ಸಿನಿ ಕ್ರಿಯೇಷನ್ಸ್ ಲಾಂಛನದಲ್ಲಿ ಸಂತೋಷ್ ಕುಮಾರ್ ಎ. ಕೆ ಮತ್ತು ವಿದ್ಯಾ ಅವರು ನಿರ್ಮಿಸಿರುವ, ಕೆ. ರಾಮನಾರಾಯಣ್ ನಿರ್ದೇಶನದಲ್ಲಿ "ಕಾಮಿಡಿ ಕಿಲಾಡಿಗಳು" ಖ್ಯಾತಿಯ ಮಡೆನೂರ್ ಮನು ನಾಯಕನಾಗಿ ನಟಿಸಿರುವ "ಕುಲದಲ್ಲಿ ಕೀಳ್ಯಾವುದೋ" ಚಿತ್ರದ ಶೀರ್ಷಿಕೆ ಗೀತೆಯನ್ನು ಡಾ॥ರಾಜಕುಮಾರ್ ಅವರ ಹುಟ್ಟುಹಬ್ಬದ ದಿನ ಶತಾಯುಷಿ ಸಾಲುಮರದ ತಿಮ್ಮಕ್ಕ ಅನಾವರಣ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದ್ದರು. ಇದೇ ಸಂದರ್ಭದಲ್ಲಿ ಚಿತ್ರದ ಬಿಡುಗಡೆ ದಿನಾಂಕ ಕೂಡ ಘೋಷಣೆಯಾಯಿತು. ಬಹು ನಿರೀಕ್ಷಿತ ಈ ಚಿತ್ರ ಮೇ 23 ರಂದು ರಾಜ್ಯಾದ್ಯಂತ ಅದ್ದೂರಿಯಾಗಿ ಬಿಡುಗಡೆಯಾಗುತ್ತಿದೆ. ಹಾಡು ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. "ಕುಲದಲ್ಲಿ ಕೀಳ್ಯಾವುದೋ" ಸರ್ವಕಾಲಿಕ ಜನಪ್ರಿಯ ಗೀತೆ. ಇಂತಹ ಜನಪ್ರಿಯ ಗೀತೆಯ ಸಾಲನಿಟ್ಟುಕೊಂಡು ಹಾಡು ಬರೆಯುವುದು ಅಷ್ಟು ಸುಲಭದ ಮಾತಲ್ಲ. ಈ ಹಾಡನ್ನು ಯೋಗರಾಜ್ ಭಟ್ ಅವರ ಹತ್ತಿರ ಬರೆಸುವುದು ಅಂತ ನಿರ್ಧಾರವಾಯಿತು. ಆದರೆ ಅವರು "ಮನದ ಕಡಲು" ಚಿತ್ರದ ಬಿಡುಗಡೆಯ ಬ್ಯುಸಿಯಲ್ಲಿದ್ದರು. ಹಾಗಾಗಿ ಅವರೆ ನನಗೆ ಈ ಹಾಡನ್ನು ಬರೆಯುವಂತೆ ಹೇಳಿದರು. ಆನಂತರ ನಾನೇ ಈ ಹಾಡು ಬರೆದೆ. ಸಂಗೀತ ನಿರ್ದೇಶಕ ಮನೋಮೂರ್ತಿಗೂ ಈ ಹಾಡು ಇಷ್ಟವಾಯಿತು. ಚೇತನ್ ಹಾಡಿರುವ ಈ ಶೀರ್ಷಿಕೆ ಗೀತೆಯಲ್ಲಿ ಯೋಗರಾಜ್ ಭಟ್ ಅಭಿನಯಿಸಿದ್ದಾರೆ. ಈಗಾಗಲೇ ಬಿಡುಗಡೆಯಾಗಿರುವ ಚಿತ್ರದ ಎರಡು ಹಾಡುಗಳು ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ. ನಿರ್ಮಾಪಕರು ಯಾವುದೇ ಕೊರತೆ ಬಾರದ ಹಾಗೆ ನಿರ್ಮಾಣ ಮಾಡಿದ್ದಾರೆ. ಚಿತ್ರತಂಡದ ಸಹಕಾರದಿಂದ ಒಂದೊಳ್ಳೆ ಚಿತ್ರ ಮೇ 23ರಂದು ನಿಮ್ಮ ಮುಂದೆ ಬರಲಿದೆ ಎಂದು ನಿರ್ದೇಶಕ ರಾಮ್‌ನಾರಾಯಣ್ ತಿಳಿಸಿದರು.




## ಜೂನಿಯರ್ ಎನ್‌ಟಿಆರ್, ಪ್ರಶಾಂತ್ ನೀಲ್ ಕಾಂಬಿನೇಷನ್

ತೆಲುಗಿನ ಮ್ಯಾನ್ ಆಫ್ ಮಾಸಸ್ ಜೂನಿಯರ್ ಎನ್‌ಟಿಆರ್ ಮತ್ತು ನಿರ್ದೇಶಕ ಪ್ರಶಾಂತ್ ನೀಲ್ ಕಾಂಬಿನೇಷನ್‌ನ ಚಿತ್ರದ ಬಿಡುಗಡೆ ದಿನಾಂಕ ಘೋಷಣೆ ಆಗಿದೆ. ಇನ್ನೂ ಶೀರ್ಷಿಕೆ ಅಂತಿಮವಾಗದ "NTR Neel" ತಾತ್ಕಾಲಿಕ ಶೀರ್ಷಿಕೆಯ ಈ ಸಿನಿಮಾ, ಇನ್ನೇನು 2026ರ ಜೂನ್‌ನಲ್ಲಿ ತೆರೆಗೆ ಬರಲಿದೆ. ಈಗಾಗಲೇ ಶೂಟಿಂಗ್ ಹಂತದಲ್ಲಿರುವ ಈ ಸಿನಿಮಾ, ಅಷ್ಟೇ ವೇಗವಾಗಿ ಚಿತ್ರೀಕರಣದಲ್ಲಿಯೂ ನಿರತವಾಗಿದ್ದು, ಅಧಿಕೃತವಾಗಿ ರಿಲೀಸ್ ದಿನಾಂಕ ಘೋಷಣೆ ಮಾಡಿದೆ. "ಕೆಜಿಎಫ್" ಸರಣಿ ಮತ್ತು "ಸಲಾರ್" ಮೂಲಕ ಈಗಾಗಲೇ ನಿರೀಕ್ಷೆಗೆ ಕಿಚ್ಚು ಹಚ್ಚಿರುವ ಪ್ರಶಾಂತ್ ನೀಲ್, ಈ ಮೆಗಾ ಪ್ರಾಜೆಕ್ಟ್ ಮೂಲಕ ಆಗಮಿಸಲು ಸಿದ್ಧರಾಗಿದ್ದಾರೆ. ಈ ನಡುವೆ ಇದೇ ಸಿನಿಮಾದ ಬಿಡುಗಡೆ ದಿನಾಂಕದ ಅಧಿಕೃತ ಘೋಷಣೆ ಆಗಿದ್ದು, 2026ರ ಜೂನ್ 25 ರಂದು ಚಿತ್ರಮಂದಿರಕ್ಕೆ ಈ ಸಿನಿಮಾ ತೆರೆಗೆ ಬರಲಿದೆ. ಮೈತ್ರಿ ಮೂವಿ ಮೇಕರ್ಸ್ ಮತ್ತು NTR ಆರ್ಟ್ಸ್ ಬ್ಯಾನರ್ ಅಡಿಯಲ್ಲಿ ಕಲ್ಯಾಣ್ ರಾಮ್ ನಂದಮೂರಿ, ನವೀನ್ ಯೆರ್ನೇನಿ, ರವಿಶಂಕರ್ ಯಲಮಂಚಿಲಿ ಮತ್ತು ಹರಿ ಕೃಷ್ಣ ಕೊಸರಾಜು ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ಈಗಾಗಲೇ ಕೇವಲ ಫಸ್ಟ್ ಲುಕ್ ಮೂಲಕವೇ ಈ ಆಕ್ಷನ್ ಪ್ಯಾಕ್ಡ್ ಸಿನಿಮಾ ಸುದ್ದಿಯಾಗಿತ್ತು. ಆದರೆ, ಹೆಚ್ಚಿನ ಅಪ್‌ಡೇಟ್ ಮಾತ್ರ ಹೊರಬಿದ್ದಿರಲಿಲ್ಲ. ಇದೀಗ ಕಾದು ಕುಳಿತಿದ್ದ ಅಭಿಮಾನಿಗಳಿಗೆ ಸಿಹಿ ಸುದ್ದಿ ನೀಡಿದ್ದಾರೆ ಸಿನಿಮಾ ಮೇಕರ್ಸ್. ಮೂಲ ತೆಲುಗು, ತಮಿಳು, ಹಿಂದಿ, ಕನ್ನಡ, ಮಲಯಾಳಂ ಮತ್ತು ಇತರ ಭಾಷೆಗಳಲ್ಲಿ ಬಿಡುಗಡೆಯಾಗಲಿದೆ. ಭುವನ್ ಗೌಡ ಛಾಯಾಗ್ರಹಣವನ್ನು ನಿರ್ವಹಿಸಿದರೆ, ರವಿ ಬಸ್ರೂರ್ ಸಂಗೀತ ಸಂಯೋಜಿಸು ತ್ತಾರೆ. ನಿರ್ಮಾಣ ವಿನ್ಯಾಸ ಚಲಪತಿ ಅವರದ್ದಾಗಿದೆ. ಈಗಾಗಲೇ ಎನ್‌ಟಿಆರ್ ಅಭಿಮಾನಿಗಳ ವಲಯದಲ್ಲಿ ಈ ಸಿನಿಮಾ ಭಾರೀ ನಿರೀಕ್ಷೆ ಹುಟ್ಟಿಸಿದೆ. ಅದರಲ್ಲೂ ಪ್ರಶಾಂತ್ ನೀಲ್ ತಮ್ಮ ಆಕ್ಷನ್ ಸಿನಿಮಾಗಳ ಮೂಲಕವೇ ಹೆಚ್ಚು ಸದ್ದು ಮಾಡಿದವರು. ಇತ್ತ ಎನ್‌ಟಿಆರ್ ತಮ್ಮ ನಟನೆ ಮತ್ತು ಆಕ್ಷನ್ ಮೂಲಕವೇ ಸುದ್ದಿಯಾದವರು. ಈಗ ಈ ನಟ ಮತ್ತು ನಿರ್ದೇಶಕರ ಕಾಂಬಿ ನೇಷನ್‌ನ ಸಿನಿಮಾ ಅದ್ಯಾವ ಮಟ್ಟದಲ್ಲಿ ಮೂಡಿಬರಲಿದೆ ಎಂಬುದಕ್ಕೆ ಇನ್ನಷ್ಟು ತಿಂಗಳು ಕಾಯಲೇಬೇಕು.



## ಪ್ಯಾನ್ ಇಂಡಿಯಾ ಶರ್ವಾ ನಟನೆಯ ಸಿನಿಮಾ

ಟಾಲಿವುಡ್ ನಟ ಶರ್ವಾ ಇದೀಗ ಹೊಸ ಪ್ರಾಜೆಕ್ಟ್ ಜತೆಗೆ ಪ್ಯಾನ್ ಇಂಡಿಯಾ ಮಟ್ಟದಲ್ಲಿ ಸದ್ದು ಮಾಡಲು ಆಗಮಿಸುತ್ತಿದ್ದಾರೆ. ಅಂದರೆ ಸಂಪತ್ ನಂದಿ ನಿರ್ದೇಶನದ ಹೊಸ ಸಿನಿಮಾದಲ್ಲಿ ಶರ್ವಾ ನಾಯಕನಾಗಿ ನಟಿಸುತ್ತಿದ್ದು, ಇದೀಗ ಈ ಚಿತ್ರದ ಶೀರ್ಷಿಕೆ ರಿವೀಲ್ ಆಗಿದೆ. ಜತೆಗೆ ಮಾಸ್ ಶೀರ್ಷಿಕೆಯ ಅನೌನ್ಸ್‌ಮೆಂಟ್‌ನ ಟೀಸರ್ ಸಹ ಬಿಡುಗಡೆ ಆಗಿದೆ. ಅಂದಹಾಗೆ, #Sharwa38 ಚಿತ್ರಕ್ಕೆ "ಭೋಗಿ" ಎಂಬ ಟೈಟಲ್ ಇಡಲಾಗಿದೆ. ಶ್ರೀ ಸತ್ಯಸಾಯಿ ಆರ್ಟ್ಸ್ ಬ್ಯಾನರ್‌ನಲ್ಲಿ ಕೆ.ಕೆ. ರಾಧಾಮೋಹನ್ ಈ ಸಿನಿಮಾ ನಿರ್ಮಾಣ ಮಾಡುತ್ತಿದ್ದಾರೆ. ಇಂದಿನಿಂದ ಈ ಸಿನಿಮಾ ಶೂಟಿಂಗ್ ಶುರುವಾಗಿದೆ. ಮೊದಲ ಸಲ ನಟ ಶರ್ವಾನಂದ್ ಮತ್ತು ಸಂಪತ್ ನಂದಿ ಪ್ಯಾನ್ ಇಂಡಿಯಾ ಪ್ರಾಜೆಕ್ಟ್ ಮೂಲಕ ಒಂದಾಗುತ್ತಿದ್ದಾರೆ. 1960ರ ದಶಕದ ಕಾಲಘಟ್ಟದಲ್ಲಿ ಸಾಗುವ ಕಥೆ ಇದಾಗಿದ್ದು, ಫಸ್ಟ್ ಸ್ಪಾರ್ಕ್‌ನಲ್ಲಿ ಒಂದಷ್ಟು ವಿಚಾರಗಳನ್ನು ಚಿತ್ರಪ್ರೇಮಿಗಳ ಮುಂದಿಟ್ಟಿದ್ದಾರೆ ನಿರ್ದೇಶಕರು. ವಿಧಿಯಾಟ, ಬೆಂಕಿ ಮತ್ತು ಸಂಘರ್ಷದ ಕಥೆಯ ಮೂಲಕ ಆಗಮಿಸುತ್ತಿದ್ದಾರೆ. ಟೈಟಲ್ ಟೀಸರ್‌ನಲ್ಲಿ ಹರಿತವಾದ ಆಯುಧವೂ ಪ್ರಮುಖ ಪಾತ್ರದಂತೆ ಕಂಡಿದೆ.



## ನಾನು ಮತ್ತು ಗುಂಡ ಗೀತೆ ಪ್ರೇಮ್ ಬಿಡುಗಡೆ

ನಿಯತ್ತಿಗೆ ಮತ್ತೊಂದು ಹೆಸರೇ ನಾಯಿ. ಅಂಥಾ ಗುಂಡ (ನಾಯಿ) ಮತ್ತು ಹುಡುಗನೊಬ್ಬನ ನಡುವಿನ ಸಂಬಂಧ ಹಾಗೂ ನಿಷ್ಕಲ್ಮಶ ಪ್ರೇಮದ ಕಥೆಯನ್ನು ಹೇಳುವ ಚಿತ್ರ 'ನಾನು ಮತ್ತು ಗುಂಡ–,2' ಪೊಯೆಮ್ ಪಿಕ್ಚರ್ಸ್ ಅಡಿಯಲ್ಲಿ ರಘುಹಾಸನ್ ಕಥೆ ಚಿತ್ರಕಥೆ ಬರೆದು ನಿರ್ಮಿಸಿ, ನಿರ್ದೇಶನ ಮಾಡಿರುವ ಈ ಚಿತ್ರದ ಟೈಟಲ್ ಸಾಂಗ್ ಲಾಂಚ್ ಕಾರ್ಯಕ್ರಮ ಈಚೆಗೆ ನಡೆಯಿತು. ಜೋಗಿ ಪ್ರೇಮ್ ಅವರು ಈ ಮೆಲೋಡಿ ಹಾಡನ್ನು ಬಿಡುಗಡೆ ಮಾಡಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಹಾಡಿನ ಸ್ವರ ಸಂಯೋಜಕ ಆರ್.ಪಿ. ಪಟ್ನಾಯ್ ಕೂಡ ಹಾಜರಿದ್ದರು. ಪ್ರಜಾಕಿರಣ ಸೇವಾ ಕಿರಣ ಟ್ರಸ್ಟ್‌ನ ನೂರಾರು ಮಕ್ಕಳು ಅತಿಥಿಗಳನ್ನು ಗುಲಾಬಿ ಹೂ ನೀಡಿ ಸ್ವಾಗತಿಸಿದ್ದು ವಿಶೇಷವಾಗಿತ್ತು. ಈ ಹಿಂದೆ ತೆರೆಕಂಡು ಯಶಸ್ವಿ ಪ್ರದರ್ಶನ ಕಂಡ ನಾನು ಮತ್ತು ಗುಂಡ ಚಿತ್ರದ ಮುಂದುವರೆದ ಭಾಗವಾದ "ನಾನು ಮತ್ತು ಗುಂಡ –2" ತೆರೆಗೆ ಬರಲು ಸಿದ್ದವಾಗಿದ್ದು ಇತ್ತೀಚೆಗಷ್ಟೇ ಈ ಚಿತ್ರದ ಟೀಸರನ್ನು ವಿಜಯ್ ಕಿರಗಂದೂರು ಅವರ ಪತ್ನಿ ಶೈಲಜಾ ಕಿರಗಂದೂರು ರಿಲೀಸ್ ಮಾಡಿದ್ದರು. ಈ ಚಿತ್ರದಲ್ಲಿ ರಾಕೇಶ್ ಅಡಿಗ ನಾಯಕನಾಗಿದ್ದು, ರಚನಾ ಇಂದರ್ ನಾಯಕಿ ಪಾತ್ರ ನಿರ್ವಹಿಸಿದ್ದಾರೆ.



## 'ಗ್ರೀನ್' ಚಿತ್ರದ ಟೀಸರ್ ಬಿಡುಗಡೆ

ಕನ್ನಡದಲ್ಲಿ ಪ್ರಯೋಗಾತ್ಮ ಚಿತ್ರಗಳಿಗೆ ನೋಡಗರ ಬೆಂಬಲ ಮೊದಲಿನಿಂದಲೂ ಸಿಗುತ್ತಿದೆ. ಅಂತಹ ವಿಭಿನ್ನ ಪ್ರಯೋಗಾತ್ಮಕ ಎನ್ನಬಹುದಾದ "ಗ್ರೀನ್" ಚಿತ್ರ ಕನ್ನಡದಲ್ಲಿ ನಿರ್ಮಾಣವಾಗಿದೆ. ರಾಜ್ ವಿಜಯ್ ಹಾಗೂ ಬಿ.ಎನ್ ಸ್ವಾಮಿ ನಿರ್ಮಾಣದ ಹಾಗೂ ರಾಜ್ ವಿಜಯ್ ನಿರ್ದೇಶನದ ಹಾಗೂ ಬಾಲಾಜಿ ಮನೋಹರ್, ಗೋಪಾಲಕೃಷ್ಣ ದೇಶಪಾಂಡೆ, ಆರ್.ಜೆ.ವಿಕ್ಕಿ ಮುಂತಾದವರು ಪ್ರಮುಖಪಾತ್ರದಲ್ಲಿ ನಟಿಸಿರುವ "ಗ್ರೀನ್" ಚಿತ್ರದ ಟೀಸರ್ ಇತ್ತೀಚೆಗೆ ಬಿಡುಗಡೆಯಾಯಿತು. ಟೀಸರ್ ನೋಡಿದಾಗ "ಗ್ರೀನ್" ಒಂದು ತಾಂತ್ರಿಕ ಶ್ರೀಮಂತಿಕೆಯಿಂದ ಕೂಡಿರುವ ಚಿತ್ರ ಎನ್ನುವುದು ತಿಳಿಯುತ್ತದೆ ಹಾಗೂ ಚಿತ್ರ ನೋಡುವ ಕಾತುರವನ್ನು ಹೆಚ್ಚಿಸುತ್ತದೆ. ಟೀಸರ್ ಬಿಡುಗಡೆಯ ನಂತರ "ಗ್ರೀನ್ " ಚಿತ್ರದ ಕುರಿತು ಚಿತ್ರತಂಡದ ಸದಸ್ಯರು ಮಾತನಾಡಿದರು. ಚಿಕ್ಕ ವಯಸ್ಸಿನಿಂದಲೂ ದೇವರ ಬಳಿ ಪ್ರಾರ್ಥಿಸುವಾಗ ಚಿತ್ರ ನಿರ್ದೇಶಕ ಆಗಬೇಕೆಂದು ಕೇಳಿಕೊಳ್ಳುತ್ತಿದ್ದವನು ನಾನು ಎಂದು ಮಾತನಾಡಿದ ನಿರ್ದೇಶಕ & ನಿರ್ಮಾಪಕ ರಾಜ್ ವಿಜಯ್, ಕನ್ನಡದ ಕೆಲವು ನಿರ್ದೇಶಕರ ಬಳಿ ಸಹ ನಿರ್ದೇಶಕನಾಗಿ ಕೆಲಸ ಮಾಡಿದ್ದ ನನಗೆ ಇದು ಮೊದಲ ನಿರ್ದೇಶನದ ಚಿತ್ರ. "ಗ್ರೀನ್" ಕನ್ನಡದಲ್ಲಿ ಅಪರೂಪ ಎನ್ನಬಹುದಾದ ಸೈಕಾಲಜಿ ಮೈಂಡ್ ಬೆಂಡಿಂಗ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಚಿತ್ರ.



## ಪುರಿ ಜಗನ್ನಾಥ್–ವಿಜಯ್ ಸೇತುಪತಿ ಸಿನಿಮಾಗೆ ದುನಿಯಾ ವಿಜಯ್ ಕುಮಾರ್ ಎಂಟ್ರಿ !...

ನಿರ್ದೇಶಕ ಪುರಿ ಜಗನ್ನಾಥ್ ಹಾಗೂ ವಿಜಯ್ ಸೇತುಪತಿ ಕಾಂಬಿನೇಷನ್ ಸಿನಿಮಾ ಈಗಾಗಲೇ ತಾರಾಬಳಗದ ಮೂಲಕ ಕುತೂಹಲ ಹೆಚ್ಚಿಸಿದೆ. ಟಬು ಇತ್ತೀಚೆಗಷ್ಟೇ ಚಿತ್ರತಂಡ ಸೇರಿಕೊಂಡಿದ್ದು, ಇದೀ ಸ್ಯಾಂಡಲ್‌ವುಡ್ ಸಲಗ ವಿಜಯ್ ಕುಮಾರ್ ಪುರಿ ಜಗನ್ನಾಥ್ ಪ್ರಾಜೆಕ್ಟ್‌ಗೆ ಎಂಟ್ರಿ ಕೊಟ್ಟಿದ್ದಾರೆ. ವೀರ ಸಿಂಹ ರೆಡ್ಡಿ ಬಳಿಕ ವಿಜಯ್ ನಟಿಸಲಿರುವ ಎರಡನೇ ತೆಲುಗು ಸಿನಿಮಾ ಇದಾಗಿದೆ. ಈ ಚಿತ್ರದಲ್ಲಿ ಪ್ರಮುಖ ಪಾತ್ರದಲ್ಲಿ ದುನಿಯಾ ವಿಜಯ್ ಅಭಿನಯಸಲಿದ್ದು, ಅವರ ನ್ನು ತಮ್ಮ ತಂಡಕ್ಕೆ ಪುರಿ ಜಗನ್ನಾಥ್ ಹಾಗೂ ನಿರ್ಮಾಪಕಿ ಚಾರ್ಮಿ ಬರ ಮಾಡಿಕೊಂಡಿದ್ದಾರೆ. ಪುರಿ ಜಗನ್ನಾಥ್ ಬರೆದು ನಿರ್ದೇಶಿಸುತ್ತಿರುವ ಈ ಪ್ಯಾನ್ ಇಂಡಿಯಾ ಪ್ರಾಜೆಕ್ಟ್ ಪುರಿ ಕನೆಕ್ಟ್ ಬ್ಯಾನರ್ ನಡಿ ಮೂಡಿಬರಲಿದೆ. ಪುರಿ ಜಗನ್ನಾಥ್ ಹಾಗೂ ಚಾರ್ಮಿ ಕೌರ್ ಈ ಚಿತ್ರಕ್ಕೆ ಬಂಡವಾಳ ಹೂಡಲಿದ್ದಾರೆ. ಜೂನ್‌ನಿಂದ ಚಿತ್ರತಂಡ ಶೂಟಿಂಗ್ ಅಖಾಡಕ್ಕೆ ಇಳಿಯಲಿದೆ.




## ನಾನಿ–ಶ್ರೀನಿಧಿ ಶೆಟ್ಟಿ ಮೇ1ಕ್ಕೆ ಹಿಟ್–3

ಶೈಲೇಶ್ ಕೋಲನು ನಿರ್ದೇಶನದ ಆಕ್ಷನ್ ಥ್ರಿಲ್ಲರ್ 'ಹಿಟ್–3' ಸಿನಿಮಾ ಮೇ1ಕ್ಕೆ ತೆರೆಗೆ ಬರ್ತಿದೆ. ನಾನಿ ಹಾಗೂ ಶ್ರೀನಿಧಿ ಶೆಟ್ಟಿ ಚಿತ್ರದ ಮುಖ್ಯಭೂಮಿಕೆಯಲ್ಲಿ ನಟಿಸಿದ್ದಾರೆ. ಚಿತ್ರ ಹಿಂದಿ, ಕನ್ನಡ, ತಮಿಳು ಭಾಷೆಗಳಿಗೂ ಡಬ್ ಆಗಿ ಪ್ರೇಕ್ಷಕರ ಮುಂದೆ ಬರಲಿದೆ. ಸದ್ಯ ಚಿತ್ರದ ಪ್ರಚಾರ ಭರದ ಸಾಗುತ್ತಿದ್ದು, ಇಂದು ಬೆಂಗಳೂರಿನಲ್ಲಿ ನಾನಿ ಶ್ರೀನಿಧಿ ಸುದ್ದಿಗೋಷ್ಠಿಯಲ್ಲಿ ಭಾಗಿಯಾಗಿ ಚಿತ್ರದ ಬಗ್ಗೆ ಸಾಕಷ್ಟು ಮಾಹಿತಿ ಹಂಚಿಕೊಂಡರು. ನಗರದ ಖಾಸಗಿ ಹೋಟೆಲ್ ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ನಾನಿ, ಹಿಟ್–3 ಸಿನಿಮಾ ಇನ್ನೊಂದು ದಿನದಲ್ಲಿ ತೆರೆಗೆ ಬರಲಿದೆ. ಈ ಚಿತ್ರದ ಬಗ್ಗೆ ಬಹಳಷ್ಟು ನಂಬಿಕೆ ಇದೆ. ನಾನು ಸಿನಿಮಾ ನೋಡಿದೆ. ಅದ್ಭುತವಾಗಿ ಮೂಡಿಬಂದಿದೆ ಎಂದರು. ಇನ್ನೂ ಪಾತ್ರಗಳ ಆಯ್ಕೆ ಬಗ್ಗೆಯೂ ಮಾತನಾಡಿದ ಅವರು, ನಾನು ವಿಭಿನ್ನ ಪಾತ್ರಗಳನ್ನು ಮಾಡಿಕೊಂಡು ಬಂದಿದ್ದೇನೆ. ಯಾವುದೇ ಜಾನರ್‌ಗೆ ಸ್ಟಿಕ್ ಆಗುವುದಿಲ್ಲ. ಹೊಸದನ್ನು ಕಲಿಯಲು ಪ್ರಯತ್ನ ಮಾಡುತ್ತೇನೆ. ಶ್ರೀನಿಧಿ ಈ ಚಿತ್ರದಲ್ಲಿ ಕನ್ನಡ ಡಬ್ ಮಾಡಿದ್ದಾರೆ ಎಂದು ತಿಳಿಸಿದರು, ಶ್ರೀನಿಧಿ ಶೆಟ್ಟಿ, ಮೇ 1ಕ್ಕೆ ಸಿನಿಮಾ ರಿಲೀಸ್ ಆಗುತ್ತಿದೆ. ಮೂರುವರೆ ವರ್ಷದ ಬಳಿಕ ನನ್ನನ್ನು ನಾನು ತೆರೆಮೇಲೆ ನೋಡಿಕೊಳ್ಳುತ್ತಿದ್ದೇನೆ. ನಾನು ಕೂಡ ಎಕ್ಸೈಟ್ ಆಗಿದ್ದೇನೆ ಎಂದರು.



## 'ದಿ' ಚಿತ್ರಕ್ಕೆ ಸಾಥ್ ನೀಡಿದ ಸಂಭಾಷಣೆಗಾರ ಮಾಸ್ತಿ

ವಿ.ಡಿ.ಕೆ ಸಿನಿಮಾಸ್ ಲಾಂಛನದಲ್ಲಿ ನಿರ್ಮಾಣವಾಗಿರುವ, ವಿನಯ್ ವಾಸುದೇವ್ ನಿರ್ದೇಶನದ ಜೊತೆಗೆ ನಾಯಕನಾಗೂ ನಟಿಸಿರುವ ಹೊಸತಂಡದ ಹೊಸಪ್ರಯತ್ನ "ದಿ" ಚಿತ್ರದ ಬಿಡುಗಡೆ ದಿನಾಂಕವನ್ನು ಕನ್ನಡ ಚಿತರಂಗದ ಜನಪ್ರಿಯ ಸಂಭಾಷಣೆಗಾರ ಮಾಸ್ತಿ ಬಿಡುಗಡೆ ಮಾಡಿದ್ದಾರೆ. ಹೊಸಕಥೆ ಆಧರಿಸಿರುವ ಈ ಚಿತ್ರ ಮೇ 16ರಂದು ಬಿಡುಗಡೆಯಾಗಲಿದೆ. ವಿಜಯ್ ಸಿನಿಮಾಸ್ ಅವರು ವಿಶಾಲ ಕರ್ನಾಟಕಕ್ಕೆ ಈ ಸಿನಿಮಾವನ್ನು ಹಂಚಿಕೆ ಮಾಡಲಿದ್ದಾರೆ. ಚಿತ್ರದ ರಿಲೀಸ್ ಡೇಟ್ ಅನೌನ್ಸ್ ಮಾಡಿ ಮಾತನಾಡಿದ ಮಾಸ್ತಿ ಅವರು, ಹೊಸ ರೀತಿಯ ಪ್ರಯತ್ನದೊಂದಿಗೆ ಹೊಸಬರು ಚಿತ್ರರಂಗ ಪ್ರವೇಶಿಸಬೇಕು. ಚಿತ್ರದ ತುಣುಕು ನೋಡಿದಾಗ ಈ ಚಿತ್ರ ತಾಂತ್ರಿಕವಾಗಿ ಶ್ರೀಮಂತಿಕೆಯಿಂದ ಕೂಡಿದೆ ಕನ್ನಡ ಜನತೆ ಹೊಸಬರ ಪ್ರಯತ್ನಕ್ಕೆ ಬೆನ್ನು ತಟ್ಟಿ ಪ್ರೋತ್ಸಾಹಿಸಬೇಕು ಎಂದು ತಿಳಿಸಿದರು.





# ಕರಾವಳಿ ತರಂಗಿಣಿ
# ಸಿನಿ ತರಂಗಿಣಿ

## ‘ಜೂನಿಯರ್ ಟೋಸ್ ಪ್ರೀಸ್ಕೂಲ್’ ಟೀಸರ್..



ನಿರ್ಮಾಪಕಿ ಅಶ್ವಿನಿ ಪುನೀತ್ ರಾಜ್‌ಕುಮಾರ್ ಶಿಕ್ಷಣ ಕ್ಷೇತ್ರ ಪ್ರವೇಶಿಸಿರುವುದು ಗೊತ್ತೇ ಇದೆ. ‘ಜೂನಿಯರ್ ಟೋಸ್ ಇಂಟರ್ನ್ಯಾಷನಲ್ ಪ್ರೀಸ್ಕೂಲ್’ ಅನ್ನು ಪ್ರಾರಂಭಿಸಿದ್ದು, ಅವರು ಸುನಿತಾ ಗೌಡ, ಸ್ಪೂರ್ತಿ ವಿಶ್ವಾಸ್, ಶ್ರುತಿ ಕಿರಣ್ ಮತ್ತು ಶ್ರುತಿ ಕಿರಣ್ ಅವರೊಂದಿಗೆ ಕೈಜೋಡಿಸಿದ್ದಾರೆ. ಬೆಂಗಳೂರಿನ ಒರಿಯನ್ ಮಾಲ್‌ನಲ್ಲಿ ಅಶ್ವಿನಿ ಪುನೀತ್ ರಾಜ್‌ಕುಮಾರ್ ಅದರ ಟೀಸರ್ ಲಾಂಚ್ ಮಾಡಿ ಮಾತನಾಡಿ, ನಾವು ‘ಜೂನಿಯರ್ ಟೋಸ್ ಇಂಟರ್ನ್ಯಾಷನಲ್ ಪ್ರೀಸ್ಕೂಲ್ 12 ಕೇಂದ್ರಗಳನ್ನು ಶುರು ಮಾಡಿದ್ದು, ಮೈಸೂರಿನಲ್ಲಿ ಒಂದು ಕೇಂದ್ರವಿದೆ. ಈ ಕಲಿಕೆಯ ಗುರಿ ಜೊತೆಗೆ ಪ್ರತೀ ಮಗುವಿನ ಸಾಮರ್ಥ್ಯವನ್ನು ಪೋಷಿಸುವುದು ಮತ್ತು ನಾಯಕತ್ವವನ್ನೂ ನಿರ್ಮಿಸುವುದು ಎಂದರು. ಈ ಸಂದರ್ಭದಲ್ಲಿ ಅತಿಥಿಯಾಗಿ ನಟಿ ಮಿಲನಾ ನಾಗರಾಜ್ ಮತ್ತು ಸುನೀತಾ ಗೌಡ, ಸ್ಪೂರ್ತಿ ವಿಶ್ವಾಸ್ ಉಪಸ್ಥಿತರಿದ್ದರು.

## ‘ಪಪ್ಪಿ’ ಸಿನಿಮಾ ಟ್ರೇಲರ್‌ಗೆ ಪದ್ಮಾವತಿ ಫಿದಾ..



ಸ್ಯಾಂಡಲ್‌ವುಡ್ ಕ್ವೀನ್ ರಮ್ಯಾ ಶ್ವಾನ ಪ್ರಿಯೆ ಅನ್ನೋದು ಸಿನಿಮಾಪ್ರೇಮಿಗಳಿಗೆ ಗೊತ್ತಿರುವ ವಿಚಾರವೇ. ಶ್ವಾನಗಳನ್ನು ತಮ್ಮ ಮಕ್ಕಳಂತೆ ಪ್ರೀತಿಸುವ ಮೋಹಕತಾರೆ ಈಗ ಶ್ವಾನದ ಸುತ್ತ ಸಾಗುವ ಜವಾರಿ ಭಾಷೆಯ ಪಪ್ಪಿ ಸಿನಿಮಾದ ಕಂಟೆಂಟ್‌ಗೆ ಪದ್ಮಾವತಿ ಫಿದಾ ಆಗಿದ್ದಾರೆ. ರಮ್ಯಾ ಈ ಹಿಂದೆಯೇ ಪಪ್ಪಿ ಟ್ರೇಲರ್ ನೋಡಿ ಮೆಚ್ಚಿಕೊಂಡಿದ್ದರು. ಇಂದು ಈ ಸಿನಿಮಾ ಕಂಡಿದೆ. ಶ್ವಾನ ಸೇರಿದಂತೆ ಚಿತ್ರದಲ್ಲಿ ನಟಿಸಿರುವ ಮಕ್ಕಳ ನಟನೆಗೆ ಮನ ಸೋತಿರುವ ರಮ್ಯಾ ಅವರಿಗೆ ಸೈಕಲ್ ಗಿಫ್ಟ್ ಮಾಡಿದ್ದಾರೆ. ಪಪ್ಪಿ ಸಿನಿಮಾದಲ್ಲಿ ಬಾಲ ಕಲಾವಿದರಾದ ಜಗದೀಶ್ ಕೊಪ್ಪಳ, ಆದಿತ್ಯ ಸಿಂಧನೂರು ತಮ್ಮ ಪಾತ್ರಕ್ಕೆ ಅದ್ಭುತವಾಗಿ ಜೀವ ತುಂಬಿದ್ದಾರೆ. ಈ ಮಕ್ಕಳ ನಟನೆ ಇಷ್ಟಪಟ್ಟು ರಮ್ಯಾ ಅವರಿಗೆ ಸೈಕಲ್ ಉಡುಗೊರೆಯಾಗಿ ನೀಡಿದ್ದಾರೆ.

## ಚಿತ್ರ ನಿರ್ಮಾಣಕ್ಕೆ ಇಳಿದ ಯಶ್ ತಾಯಿ..

ರಾಕಿಂಗ್ ಸ್ಟಾರ್ ಯಶ್ ತಾಯಿ ಪುಷ್ಪ ಅರುಣ್ ಕುಮಾರ್ ಹೊಸದೊಂದು ಸಿನಿಮಾ ನಿರ್ಮಾಣ ಸಂಸ್ಥೆ ಆರಂಭಿಸಿದ್ದಾರೆ. ಅದಕ್ಕೆ ಪಿಎ ಪ್ರಡಕ್ಷನ್ಸ್ ಎಂದು ಹೆಸರಿಟ್ಟಿದ್ದಾರೆ. ಪಿ ಅಂದ್ರೆ ಪುಷ್ಪಾ. ಎ ಅಂದ್ರೆ ಅರುಣ್ ಕುಮಾರ್ ಎಂದರ್ಥ. ಈ ಪ್ರೊಡಕ್ಷನ್ ಹೌಸ್ ಮೂಲಕ ಚೊಚ್ಚಲ ಚಿತ್ರ ನಿರ್ಮಾಣವಾಗುತ್ತಿದೆ. ಅಕ್ಷಯ ತೃತೀಯ ದಿನದಂದು ಚಿತ್ರ ತಂಡ ಟೈಟಲ್ ಹಾಗೂ ಫಸ್ಟ್‌ಲುಕ್ ರಿಲೀಸ್ ಮಾಡಿದೆ. ಪಿಎ ಪ್ರೊಡಕ್ಷನ್ಸ್ ಮೊದಲ ಪ್ರಯತ್ನಕ್ಕೆ ಕೊತ್ತಲವಾಡಿ ಎಂಬ ಶೀರ್ಷಿಕೆ ಇಡಲಾಗಿದೆ. ಹಿರಿಯ ನಿರ್ದೇಶಕರಾದ ಕೆವಿ ರಾಜು, ರವಿ ಶ್ರೀವತ್ಸ ಗರಡಿಯಲ್ಲಿ ಕೆಲಸ ಮಾಡಿರುವ ಶ್ರೀರಾಜ್ ಈ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗಿ ಮೊದಲ ಹೆಜ್ಜೆ ಇಡುತ್ತಿದ್ದಾರೆ. ಕನ್ನಡದ ಪ್ರತಿಭಾನ್ವಿತ ನಾಯಕ ನಟ ಪೃಥ್ವಿ ಅಂಬರ್ ನಾಯಕನಾಗಿ ನಟಿಸುತ್ತಿದ್ದು, ಕಿರುತೆರೆ ನಟಿ ಕಾವ್ಯಾ ಶೈವ ನಾಯಕಿಯಾಗಿ ನಟಿಸುತ್ತಿದ್ದಾರೆ.



## ಮೇ 9 ಕ್ಕೆ ಬಿಡುಗಡೆಯಾಗಲಿರುವ “ಸೂತ್ರಧಾರಿ”

ಈಗಲ್ ಮೀಡಿಯಾ ಕ್ರಿಯೇಷನ್ಸ್ ಮೂಲಕ ನವರಸನ್ ನಿರ್ಮಾಣ ಮಾಡಿರುವ, ಕಿರಣ್ ಕುಮಾರ್ ನಿರ್ದೇಶನದಲ್ಲಿ ಚಂದನ್ ಶೆಟ್ಟಿ ಮೊದಲ ಬಾರಿಗೆ ನಾಯಕನಾಗಿ ನಟಿಸಿರುವ “ಸೂತ್ರಧಾರಿ” ಸಸ್ಪೆನ್ಸ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಚಿತ್ರ. ಈ ಚಿತ್ರ ಮೇ 9ರಂದು ಬಿಡುಗಡೆಯಾಗಲಿದೆ. ಟ್ರೇಲರ್ ಬಿಡುಗಡೆ ನಂತರ ಮುಖ್ಯ ಆತಿಥಿಗಳಾಗಿ ಆಗಮಿಸಿದ್ದ ಧ್ರುವ ಸರ್ಜಾ ಟ್ರೇಲರ್ ಚೆನ್ನಾಗಿದೆ. ತಂತ್ರಜ್ಞರ ಕೆಲಸ ಹಾಗೂ ಕಲಾವಿದರ ಅಭಿನಯ ಸೊಗಸಾಗಿದೆ. ನಾನು ಇಲ್ಲಿಗೆ ಬರಲು ಎರಡು ಕಾರಣ. ಒಂದು ನಮ್ಮ “ಪೊಗರು” ಚಿತ್ರದ ಇವೆಂಟ್ ಆಯೋಜನೆ ಮಾಡಿದ್ದು ನವರಸನ್ ಅವರು. ಮತ್ತೊಂದು ನನ್ನ ಬಾಲ್ಯದ ಗೆಳೆಯ ಚಂದನ್ ಶೆಟ್ಟಿ ನಾಯಕನಾಗಿ ನಟಿಸಿರುವ ಮೊದಲ ಚಿತ್ರವಿದು ಎಂದು ತಿಳಿಸಿದ ಧ್ರುವ ಸರ್ಜಾ ಚಿತ್ರಕ್ಕೆ ಶುಭ ಹಾರೈಸಿದರು. ನಿರ್ದೇಶಕ ಕಿರಣ್ ಕುಮಾರ್, ನಾಯಕಿ ಅಪೂರ್ವ ಉಪಸ್ಥಿತರಿದ್ದರು.









Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, ‘A’ 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212